ಪ್ರಜಾವಾಣಿ
ಶನಿವಾರ • ಫೆಬ್ರುವರಿ 18, 2023

ಮಣಿಪಾಲದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ

# ಅಂತರರಾಷ್ಟ್ರೀಯ ಬಾಲ್ಯದ ಕ್ಯಾನ್ಸರ್ ದಿನ

ಪ್ರಜಾವಾಣಿ ವಾರ್ತೆ

**ಉಡುಪಿ:** ಸೂಕ್ತ ಸಮಯದಲ್ಲಿ ಸಮರ್ಪಕ ಚಿಕಿತ್ಸೆ ಹಾಗೂ ಆರೈಕೆ ದೊರೆತರೆ ಬಾಲ್ಯದ ಕ್ಯಾನ್ಸರ್ ರೋಗವನ್ನು ಗುಣಪಡಿಸಬಹುದು. ಕ್ಯಾನ್ಸರ್ ಪೀಡಿತ ಮಗು ಚಿಕಿತ್ಸೆ ಸಿಗದೆ ವಂಚಿತವಾಗಬಾರದು ಎಂಬ ನಿಟ್ಟಿನಲ್ಲಿ ಮಣಿಪಾಲದ ಕೆಎಂಸಿ ಆಸ್ಪತ್ರೆ ಶ್ರಮಿಸುತ್ತಿದೆ ಎಂದು ಮಣಿಪಾಲದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ಹೇಳಿದರು.

ಮಣಿಪಾಲದ ಕಸ್ತೂರಬಾ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಯಲ್ಲಿ ನಡೆದ ಬಾಲ್ಯದ ಕ್ಯಾನ್ಸರ್ ದಿನಾಚರಣೆಯಲ್ಲಿ ಮಾತನಾಡಿ, 'ಬಾಲ್ಯದ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು. ಕ್ಯಾನ್ಸರ್ ಪೀಡಿತ ಮಕ್ಕಳು, ಆರೈಕೆ ಮಾಡುವವರು ಮತ್ತು ಕ್ಯಾನ್ಸರ್‌ನಿಂದ ಬದುಕುಳಿದವರಿಗೆ ಬೆಂಬಲ ವ್ಯಕ್ತಪಡಿಸಲು ಜಾಗತಿಕವಾಗಿ ಫೆ.15ರಂದು ಅಂತರರಾಷ್ಟ್ರೀಯ ಬಾಲ್ಯದ ಕ್ಯಾನ್ಸರ್ ದಿನ ಆಚರಿಸಲಾಗುತ್ತದೆ ಎಂದರು.

ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕಾಲಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಹರೀಶ್ ವರ್ಮಾ 'ಕ್ಯಾನ್ಸರ್ ಪೀಡಿತ ಮಕ್ಕಳಲ್ಲಿ ಸಮಗ್ರ ಚಿಕಿತ್ಸಾ ಆರೈಕೆ ವಿಧಾನದಲ್ಲಿ ಉತ್ತಮ ಫಲಿತಾಂಶ ದೊರೆಯಲು ಸಂಘಟಿತ ಶ್ರಮ ಹಾಗೂ ಸಹಕಾರದ ಅಗತ್ಯವಿದೆ ಎಂದರು.



ಮಣಿಪಾಲದ ಕಸ್ತೂರಬಾ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಯಲ್ಲಿ ನಡೆದ ಬಾಲ್ಯದ ಕ್ಯಾನ್ಸರ್ ದಿನಾಚರಣೆಯಲ್ಲಿ ಡಾ.ಕೆ.ವಿ.ಗಣಪತಿ ಬಾಲ್ಯದ ರಕ್ತದ ಕ್ಯಾನ್ಸರ್ ಕುರಿತ ಕಿರು ಪುಸ್ತಕ ಬಿಡುಗಡೆಗೊಳಿಸಿದರು.

ಜೀತ್ ಅಸೋಸಿಯೇಷನ್ ಫಾರ್ ಸಪೋರ್ಟ್ ಆಫ್ ಕ್ಯಾನ್ಸರ್ ಪೇಶೆಂಟ್ ಸಂಸ್ಥೆಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಕೆ.ವಿ.ಗಣಪತಿ ಬಾಲ್ಯದ ರಕ್ತದ ಕ್ಯಾನ್ಸರ್ ಕುರಿತ ಕಿರು ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿ, ರೋಗದ ಕುರಿತು ವಿವರವಾದ ಮಾಹಿತಿ ಆರೈಕೆ ಮಾಡುವವರಿಗೆ ಅವರ ಮಾತೃಭಾಷೆಯಲ್ಲಿ ಸಿಗಬೇಕು. ಇದರಿಂದ ರೋಗಿ ಶೀಘ್ರ ಗುಣಮುಖವಾಗಲು ಸಾಧ್ಯವಾಗುತ್ತದೆ ಎಂದರು.

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ವಂದಿಸಿದರು. ಬೋಧನಾ ಆಸ್ಪತ್ರೆಗಳ ಕಾರ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಮತ್ತು ಕೆಎಂಸಿ ಸಹ ಡೀನ್ ಡಾ.ಕೃಷ್ಣಾನಂದ ಪ್ರಭು ಇದ್ದರು. ಮಣಿಪಾಲ ಆಸ್ಪತ್ರೆಯ ನರ್ಸಿಂಗ್ ಸೇವೆಗಳ ಮುಖ್ಯಸ್ಥೆ ಡಾ.ಪಿ. ಸುಭಾ ಸೂರಿಯಾ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು.

ಮಕ್ಕಳು ಮತ್ತು ಪಾಲಕರಿಗೆ ಮನರಂಜನಾ ಕಾರ್ಯಕ್ರಮ ನಡೆಯಿತು. ಮಕ್ಕಳ ರಕ್ತ ಶಾಸ್ತ್ರ ಮತ್ತು ಅಂಕಾಲಜಿ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಅರ್ಚನಾ ಎಂ.ವಿ ಮತ್ತು ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಅತಿಥಿಗಳನ್ನು ಪರಿಚಯಿಸಿದರು. ವಿಭಾಗದ ಸಾಮಾಜಿಕ ಸೇವಾ ಕಾರ್ಯಕರ್ತೆ ವಾಣಿಶ್ರೀ ಕಾರ್ಯಕ್ರಮ ನಿರೂಪಿಸಿದರು.

> **ಕೆಲವು ದಶಕಗಳಲ್ಲಿ ಬಾಲ್ಯದ ಕ್ಯಾನ್ಸರ್‌ಗಳಿಗೆ ಸಕಾಲದಲ್ಲಿ ಚಿಕಿತ್ಸೆ ದೊರೆಯುತ್ತಿರುವುದರಿಂದ ಕಾಯಿಲೆ ಎದುರಿಸಿ ಬದುಕುಳಿಯುವವರ ಸಂಖ್ಯೆ ಹೆಚ್ಚಾಗಿದೆ.**
> **ಡಾ.ರಾಜ್ ವಾರಿಯರ್,** ಮಾಹೆ ಮಣಿಪಾಲದ ಮಾಜಿ ಉಪ ಕುಲಪತಿ

18-2-2023
UDAYAVANI - MANIPAL

# ಮಣಿಪಾಲ: ಬಾಲ್ಯ ಕ್ಯಾನ್ಸರ್ ಜಾಗೃತಿ ದಿನ



**ಮಣಿಪಾಲ, ಫೆ.17:** ಮಣಿಪಾಲದ ಕೆಎಂಸಿ ಮತ್ತು ಆಸ್ಪತ್ರೆ ವತಿಯಿಂದ ಶುಕ್ರವಾರ ಶಿರ್ಡಿ ಸಾಯಿಬಾಬಾ ಕ್ಯಾನ್ಸರ್ ಆಸ್ಪತ್ರೆ ಸಭಾಂಗಣದಲ್ಲಿ ಅಂತಾರಾಷ್ಟ್ರೀಯ ಬಾಲ್ಯ ಕ್ಯಾನ್ಸರ್ ಜಾಗೃತಿ ದಿನಾಚರಣೆ ನಡೆಯಿತು.

ಕೆಎಂಸಿ ಡೀನ್ ಡಾ। ಪದ್ಮರಾಜ್ ಹೆಗ್ಡೆ ಮಾತನಾಡಿ, ಕ್ಯಾನ್ಸರ್ ಇರುವ ಪ್ರತಿ ಮಗುವು ಚಿಕಿತ್ಸೆ ಪಡೆಯುವಂತೆ ಆಗಬೇಕು. ಆರಂಭದಲ್ಲಿಯೇ ಕ್ಯಾನ್ಸರ್ ಗುರುತಿಸುವ ಮೂಲಕ ಸೂಕ್ತ ಚಿಕಿತ್ಸೆ ನೀಡಿ ಗುಣಪಡಿಸಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಕೆಎಂಸಿ ಶ್ರಮಿಸುತ್ತಿದೆ ಎಂದರು.

ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ। ಹರೀಶ್ ವರ್ಮ ಟಿ. ಅವರು, ಕ್ಯಾನ್ಸರ್ ಹೊಂದಿರುವ ಮಕ್ಕಳಲ್ಲಿ ಸಮಗ್ರ ಚಿಕಿತ್ಸಾ ಆರೈಕೆ ವಿಧಾನದಲ್ಲಿ ಗರಿಷ್ಠ ಸಾಧನೆ ಸಾಧಿಸಲು ಬಹಳಷ್ಟು ಜನರು ಕೈಜೋಡಿಸುವ ಅವಶ್ಯಕತೆ ಇದೆ ಎಂದು ಹೇಳಿದರು. ಜೀತ್ ಅಸೋಸಿಯೇಶನ್ ಫಾರ್ ಸಪೋರ್ಟ್ ಟು ಕ್ಯಾನ್ಸರ್ ಪೇಷಂಟ್ ಸಿಇಒ ಡಾ। ಕೆ.ವಿ. ಗಣಪತಿ ಅವರು, ಬಾಲ್ಯದ ರಕ್ತದ ಕ್ಯಾನ್ಸರ್‌ಗಳ ಕುರಿತಾದ ಮಾಹಿತಿ ಕಿರು ಪುಸ್ತಕವನ್ನು ಬಿಡುಗಡೆ ಮಾಡಿ, ಕ್ಯಾನ್ಸರ್ ರೋಗಿಗಳ ಆರೈಕೆ ಮಾಡುವವರಿಗೆ ಸೂಕ್ತ ಮಾರ್ಗದರ್ಶನ ಅಗತ್ಯ ಎಂದರು.

ಮಾಹೆ ವಿಶ್ರಾಂತ ಕುಲಪತಿ ಡಾ। ರಾಜ್ ವಾರಿಯರ್, ಬೋಧನಾ ಆಸ್ಪತ್ರೆಗಳ ಕಾರ್ಯನಿರ್ವಹಣಾಧಿಕಾರಿ ಡಾ। ಆನಂದ್ ವೇಣುಗೋಪಾಲ್ ಮತ್ತು ಕೆಎಂಸಿ ಸಹ ಡೀನ್ ಡಾ। ಕೃಷ್ಣಾನಂದ ಪ್ರಭು ಉಪಸ್ಥಿತರಿದ್ದರು.

ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ್ ಶೆಟ್ಟಿ ವಂದಿಸಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ನರ್ಸಿಂಗ್ ಸೇವೆಗಳ ಮುಖ್ಯಸ್ಥೆ ಡಾ। ಪಿ.ಶುಭಾ ಸೂರಿಯಾ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು. ಅನಂತರ ಮಕ್ಕಳು ಮತ್ತು ಅವರ ಪಾಲಕರಿಗೆ ಮನೋರಂಜನೆ ಕಾರ್ಯಕ್ರಮ ನಡೆಯಿತು.

ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಿಕೆ ಡಾ। ಅರ್ಚನಾ ಎಂ.ವಿ. ಮತ್ತು ವಿಭಾಗದ ಸಹ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ। ವಾಸುದೇವ ಭಟ್ ಅತಿಥಿಗಳನ್ನು ಪರಿಚಯಿಸಿದರು. ವಿಭಾಗದ ಸಾಮಾಜಿಕ ಸೇವಾ ಕಾರ್ಯಕರ್ತೆ ವಾಣಿಶ್ರೀ ನಿರೂಪಿಸಿದರು.

ವಿಜಯವಾಣಿ
VIJAYAVANI » MANGALURU
ಶನಿವಾರ 18 ಫೆಬ್ರವರಿ 2023
18 FEBRUARY 2023

# ಕೆಎಂಸಿಯಲ್ಲಿ ಬಾಲ್ಯ ಕ್ಯಾನ್ಸರ್ ದಿನ

## ಕಿರು ಪುಸ್ತಕ ಬಿಡುಗಡೆ | ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಣೆ

ಉಡುಪಿ: ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಇತ್ತೀಚೆಗೆ ಅಂತಾರಾಷ್ಟ್ರೀಯ ಬಾಲ್ಯ ಕ್ಯಾನ್ಸರ್ ದಿನ ಆಚರಿಸಲಾಯಿತು.

ಜೀತ್ ಅಸೋಸಿಯೇಶನ್ ಫಾರ್ ಸಪೋರ್ಟ್ ಆಫ್ ಕ್ಯಾನ್ಸರ್ ಪೇಶೆಂಟ್‌ನ ಸಿಇಒ ಡಾ.ಕೆ.ವಿ.ಗಣಪತಿ ಬಾಲ್ಯದ ರಕ್ತದ ಕ್ಯಾನ್ಸರ್‌ಗಳ ಕುರಿತ ಕಿರು ಪುಸ್ತಕವನ್ನು ಬಿಡುಗಡೆ ಮಾಡಿದರು. ಮಣಿಪಾಲದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ, ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಹರೀಶ್ ವರ್ಮಾ, ಮಾಹೆ ಮಣಿಪಾಲದ ಮಾಜಿ ಉಪಕುಲಪತಿ ಡಾ.ರಾಜ್ ವಾರಿಯರ್, ಬೋಧನಾ ಆಸ್ಪತ್ರೆಗಳ ಕಾರ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಮತ್ತು ಕೆಎಂಸಿ ಮಣಿಪಾಲದ ಸಹ ಡೀನ್ ಡಾ.ಕೃಷ್ಣಾನಂದ ಪ್ರಭು ಉಪಸ್ಥಿತರಿದ್ದರು.




ಜೀತ್ ಅಸೋಸಿಯೇಶನ್ ಫಾರ್ ಸಪೋರ್ಟ್ ಆಫ್ ಕ್ಯಾನ್ಸರ್ ಪೇಶೆಂಟ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ವಿ.ಗಣಪತಿ ಬಾಲ್ಯದ ರಕ್ತದ ಕ್ಯಾನ್ಸರ್‌ಗಳ ಕುರಿತಾದ ಮಾಹಿತಿ ಕಿರು ಪುಸ್ತಕವನ್ನು ಬಿಡುಗಡೆ ಮಾಡಿದರು. ಮಣಿಪಾಲದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ, ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಹರೀಶ್ ವರ್ಮಾ ಮೊದಲಾದವರಿದ್ದರು.

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ವಂದಿಸಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ನರ್ಸಿಂಗ್ ಸೇವೆಗಳ ಮುಖ್ಯಸ್ಥೆ ಡಾ.ಪಿ.ಸುಬಾ ಸೂರಿಯಾ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು. ನಂತರ ಮಕ್ಕಳು ಮತ್ತು ಅವರ ಪಾಲಕರಿಗೆ ಮನರಂಜನಾ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಅರ್ಚನಾ ಎಂ.ವಿ ಮತ್ತು ವಿಭಾಗದ ಸಹ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ.ವಾಸುದೇವ ಭಟ್ ಅತಿಥಿಗಳನ್ನು ಪರಿಚಯಿಸಿದರು. ಸಾಮಾಜಿಕ ಸೇವಾ ಕಾರ್ಯಕರ್ತೆ ವಾಣಿಶ್ರೀ ನಿರೂಪಿಸಿದರು.

ಸಂಯುಕ್ತ ಕರ್ನಾಟಕ

# ಸೂಕ್ತ ಸಮಯದಲ್ಲಿ ಚಿಕಿತ್ಸೆಯಿಂದ ಕ್ಯಾನ್ಸರ್ ಗುಣ





**ಉಡುಪಿ:** ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲೇ ಗುರುತಿಸಿ, ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಿದಲ್ಲಿ ಅದನ್ನು ಗುಣಪಡಿಸಬಹುದು ಎಂದು ಮಣಿಪಾಲ ಕೆಎಂಸಿ ಡೀನ್ ಡಾ. ಪದ್ಮರಾಜ ಹೆಗ್ಡೆ ಹೇಳಿದರು. ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಶುಕ್ರವಾರ ನಡೆದ ಅಂತಾರಾಷ್ಟ್ರೀಯ ಬಾಲ್ಯ ಕ್ಯಾನ್ಸರ್ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಕ್ಕಳ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಕ್ಯಾನ್ಸರ್‌ನಿಂದ ಬದುಕುಳಿದವರಿಗೆ ಬೆಂಬಲ ಅಗತ್ಯವಿದೆ ಎಂದವರು ಪ್ರತಿಪಾದಿಸಿದರು. ಕ್ಯಾನ್ಸರ್ ಪೀಡಿತ ಯಾವುದೇ ಮಗು ಚಿಕಿತ್ಸೆಯಿಂದ ವಂಚಿತವಾಗಬಾರದು ಎಂಬುದು ಕೆಎಂಸಿ ಆಸ್ಪತ್ರೆಯ ಆಶಯ ಎಂದರು. ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಹರೀಶ್ ವರ್ಮಾ ಟಿ., ಜನತೆ ಕೈಜೋಡಿಸುವ ಅಗತ್ಯ ಇದೆ ಎಂದರು.

ಮುಖ್ಯ ಅತಿಥಿಯಾಗಿದ್ದ ಜೀತ್ ಅಸೋಸಿಯೇಷನ್ ಫಾರ್ ಸಪೋರ್ಟ್ ಆಫ್ ಕ್ಯಾನ್ಸರ್ ಪೇಶೆಂಟ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ಕೆ.ವಿ. ಗಣಪತಿ, ಮಕ್ಕಳ ರಕ್ತದ ಕ್ಯಾನ್ಸರ್ ಕುರಿತ ಮಾಹಿತಿ ಕಿರು ಪುಸ್ತಕ ಬಿಡುಗಡೆಗೊಳಿಸಿದರು. ಮಾಹೆ ಮಣಿಪಾಲ ನಿವೃತ್ತ ಉಪಕುಲಪತಿ ಡಾ. ರಾಜ್ ವಾರಿಯರ್ ಮಾತನಾಡಿದರು. ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ಬೋಧನಾ ಆಸ್ಪತ್ರೆಗಳ ಕಾರ್ಯ ನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಮತ್ತು ಕೆಎಂಸಿ ಮಣಿಪಾಲದ ಸಹ ಡೀನ್ ಡಾ. ಕೃಷ್ಣಾನಂದ ಪ್ರಭು ಇದ್ದರು. ನರ್ಸಿಂಗ್ ಸೇವೆಗಳ ಮುಖ್ಯಸ್ಥೆ ಡಾ. ಪಿ. ಸುಬಾ ಸೂರಿಯಾ ಬಹುಮಾನ ವಿತರಿಸಿದರು. ಡಾ. ಅರ್ಚನಾ ಎಂ.ವಿ. ಹಾಗೂ ವಿಭಾಗದ ಸಹ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ. ವಾಸುದೇವ ಭಟ್ ಪರಿಚಯಿಸಿದರು.

# ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಅಂತಾರಾಷ್ಟ್ರೀಯ ಬಾಲ್ಯ ಕ್ಯಾನ್ಸರ್ ದಿನದ ಆಚರಣೆ

By *Janardhan Kodavoor/Team karavalixpress,* February 17, 2023




ಮಣಿಪಾಲ, 17ನೇ ಫೆಬ್ರುವರಿ 2023: ಸರಿಯಾದ ತಂಡದಿಂದ ಸರಿಯಾದ ಚಿಕಿತ್ಸೆಯೊಂದಿಗೆ ಸರಿಯಾದ ಸಮಯದಲ್ಲಿ ಚಿಕಿತ್ಸೆ ನೀಡಿದರೆ ಬಾಲ್ಯದ ಹೆಚ್ಚಿನ ಕ್ಯಾನ್ಸರ್ ಗಳನ್ನು ಗುಣಪಡಿಸಬಹುದು. ಬಾಲ್ಯದ ಕ್ಯಾನ್ಸರ್ ಬಗ್ಗೆ, ಜಾಗೃತಿ ಮೂಡಿಸಲು ಮತ್ತು ಕ್ಯಾನ್ಸರ್ ಪೀಡಿತ ಮಕ್ಕಳು, ಅವರ ಆರೈಕೆ ಮಾಡುವವರು ಮತ್ತು ಕ್ಯಾನ್ಸರ್ ನಿಂದ ಬದುಕುಳಿದವರಿಗೆ ಬೆಂಬಲ ವ್ಯಕ್ತಪಡಿಸಲು ಜಾಗತಿಕವಾಗಿ ಪ್ರತಿ ವರ್ಷ ಫೆಬ್ರುವರಿ 15 ರಂದು ಅಂತರರಾಷ್ಟ್ರೀಯ ಬಾಲ್ಯದ ಕ್ಯಾನ್ಸರ್ ದಿನವನ್ನು (ಐ ಸಿ ಸಿ ಡಿ ) ಆಚರಿಸಲಾಗುತ್ತದೆ.

“ಉತ್ತಮ ಬದುಕುಳಿಯುವಿಕೆ “ನಿಮ್ಮ ಕೈಗಳ ಮೂಲಕ ಸಾಧಿಸಬಹುದಾಗಿದೆ” ಎಂಬುದು ಐ ಸಿ ಸಿ ಡಿ ಯ ಮೂರು ವರ್ಷಗಳ ಧ್ಯೇಯ (2021-2023) ವಾಕ್ಯವಾಗಿದ್ದು, ಇದು ಈ ಅಭಿಯಾನದ ಮೂರನೇ ವರ್ಷವಾಗಿದೆ.

ಮಣಿಪಾಲದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ತನ್ನ ಸ್ವಾಗತ ಭಾಷಣದಲ್ಲಿ , “ಕ್ಯಾನ್ಸರ್ ಇರುವ ಯಾವುದೇ ಮಗು ಚಿಕಿತ್ಸೆ ಇಲ್ಲದೆ ಹೋಗಬಾರದು” ಈ ನಿಟ್ಟಿನಲ್ಲಿ ಕೆಎಂಸಿ, ಮಣಿಪಾಲವು ಶ್ರಮಿಸುತ್ತಿದೆ ಎಂದು ಹೇಳಿದರು. ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಹರೀಶ್ ವರ್ಮಾ ಟಿ ಅವರು ತಮ್ಮ ಅವಲೋಕನದಲ್ಲಿ, “ಕ್ಯಾನ್ಸರ್ ಹೊಂದಿರುವ ಮಕ್ಕಳಲ್ಲಿ ಸಮಗ್ರ ಚಿಕಿತ್ಸಾ ಆರೈಕೆ ವಿಧಾನದಲ್ಲಿ ಗರಿಷ್ಠ ಸಾಧನೆ ಸಾಧಿಸಲು ಬಹಳಷ್ಟು ಜನರು ಕೈಜೋಡಿಸುವ ಅವಶ್ಯಕತೆ ಇದೆ ” ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿದ್ದ ಜೀತ್ ಅಸೋಸಿಯೇಷನ್ ಫಾರ್ ಸಪೋರ್ಟ್ ಆಫ್ ಕ್ಯಾನ್ಸರ್ ಪೇಶೆಂಟ್ (ಜಸ್ಕ್ಯಾಪ್ JASCAP) ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಕೆ.ವಿ.ಗಣಪತಿ ಅವರು, ಬಾಲ್ಯದ ರಕ್ತದ ಕ್ಯಾನ್ಸರ್‌ಗಳ ಕುರಿತಾದ ಮಾಹಿತಿ ಕಿರು ಪುಸ್ತಕವನ್ನು ಬಿಡುಗಡೆ ಮಾಡಿದರು ಮತ್ತು ಅವರು ಮಾತನಾಡುತ್ತಾ “ರೋಗದ ಕುರಿತು ವಿವರವಾದ ಮಾಹಿತಿಯನ್ನು ಆರೈಕೆ ಮಾಡುವವರಿಗೆ ಅವರಿಗೆ ಚೆನ್ನಾಗಿ ಅರ್ಥವಾಗುವ ಭಾಷೆಯಲ್ಲಿ ನೀಡಬೇಕು” ಎಂದು ಹೇಳಿದರು.

ಮಾಹೆ ಮಣಿಪಾಲದ ಮಾಜಿ ಉಪಕುಲಪತಿ ಡಾ.ರಾಜ್ ವಾರಿಯರ್ ಕಾರ್ಯಕ್ರಮದ ಗೌರವ ಅತಿಥಿಯಾಗಿದ್ದರು. ಅವರು ಮಾತನಾಡುತ್ತಾ , “ಕಳೆದ ಕೆಲವು ದಶಕಗಳಲ್ಲಿ ಬಾಲ್ಯದ ಕ್ಯಾನ್ಸರ್‌ಗಳಿಗೆ ಸಕಾಲದಲ್ಲಿ ಚಿಕಿತ್ಸೆ ದೊರಯುತ್ತಿರುವುದರಿಂದ, ಕಾಯಿಲೆಯಿಂದ ಬದುಕುಳಿಯುವಲ್ಲಿ ಮಹತ್ತರವಾದ ಸುಧಾರಣೆ ಕಂಡುಬಂದಿದೆ ಮತ್ತು ಬೆಂಬಲದ ಆಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಅಂತಾರಾಷ್ಟ್ರೀಯ ಬಾಲ್ಯ ಕ್ಯಾನ್ಸರ್ ದಿನದ ಆಚರಣೆಕೆಯು ಚಿಕಿತ್ಸೆಯ ಪ್ರಮುಖ ಅಂಶವಾಗಿದೆ" ಎಂದರು.

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ವಂದಿಸಿದರು. ಬೋಧನಾ ಆಸ್ಪತ್ರೆಗಳ ಕಾರ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಮತ್ತು ಕೆ ಎಂ ಸಿ ಮಣಿಪಾಲದ ಸಹ ಡೀನ್ ಡಾ ಕೃಷ್ಣಾನಂದ ಪ್ರಭು ಉಪಸ್ಥಿತರಿದ್ದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ನರ್ಸಿಂಗ್ ಸೇವೆಗಳ ಮುಖ್ಯಸ್ಥೆ ಡಾ.ಪಿ.ಸುಬಾ ಸೂರಿಯಾ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು.

ಸಭಾ ಕಾರ್ಯಕ್ರಮದ ನಂತರ ಮಕ್ಕಳು ಮತ್ತು ಅವರ ಪಾಲಕರಿಗೆ ಮನರಂಜನಾ ಕಾರ್ಯಕ್ರಮ ಏರ್ಪಡಿಸ ಲಾಗಿತ್ತು. ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಅರ್ಚನಾ ಎಂ.ವಿ ಮತ್ತು ವಿಭಾಗದ ಸಹ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ.ವಾಸುದೇವ ಭಟ್ ಮುಖ್ಯ ಅತಿಥಿಗಳನ್ನು ಪರಿಚಯಿಸಿದರು. ವಿಭಾಗದ ಸಾಮಾಜಿಕ ಸೇವಾ ಕಾರ್ಯಕರ್ತೆ ವಾಣಿಶ್ರೀ ಕಾರ್ಯಕ್ರಮವನ್ನು ನಿರೂಪಿಸಿದರು .

ಹಾಯ್ ಕರಾವಳಿ

ಕರಾವಳಿ

# ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಅಂತಾರಾಷ್ಟ್ರೀಯ ಬಾಲ್ಯ ಕ್ಯಾನ್ಸರ್ ದಿನದ ಆಚರಣೆ




Spread the love

ಮಣಿಪಾಲ, 17ನೇ ಫೆಬ್ರವರಿ 2023: ಸರಿಯಾದ ತಂಡದಿಂದ ಸರಿಯಾದ ಚಿಕಿತ್ಸೆಯೊಂದಿಗೆ ಸರಿಯಾದ ಸಮಯದಲ್ಲಿ ಚಿಕಿತ್ಸೆ ನೀಡಿದರೆ ಬಾಲ್ಯದ ಹೆಚ್ಚಿನ ಕ್ಯಾನ್ಸರ್ ಗಳನ್ನು ಗುಣಪಡಿಸಬಹುದು. ಬಾಲ್ಯದ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಕ್ಯಾನ್ಸರ್ ಪೀಡಿತ ಮಕ್ಕಳು, ಅವರ ಆರೈಕೆ ಮಾಡುವವರು ಮತ್ತು ಕ್ಯಾನ್ಸರ್ ನಿಂದ ಬದುಕುಳಿದವರಿಗೆ ಬೆಂಬಲ ವ್ಯಕ್ತಪಡಿಸಲು ಜಾಗತಿಕವಾಗಿ ಪ್ರತಿ ವರ್ಷ ಫೆಬ್ರವರಿ 15 ರಂದು ಅಂತರರಾಷ್ಟ್ರೀಯ ಬಾಲ್ಯದ ಕ್ಯಾನ್ಸರ್ ದಿನವನ್ನು (ಐ ಸಿ ಸಿ ಡಿ ) ಆಚರಿಸಲಾಗುತ್ತದೆ. "ಉತ್ತಮ ಬದುಕುಳಿಯುವಿಕೆ "ನಿಮ್ಮ ಕೈಗಳ ಮೂಲಕ ಸಾಧಿಸಬಹುದಾಗಿದೆ" ಎಂಬುದು ಐ ಸಿ ಸಿ ಡಿ ಯ ಮೂರು ವರ್ಷಗಳ ಧ್ಯೇಯ (2021-2023) ವಾಕ್ಯವಾಗಿದ್ದು, ಇದು ಈ ಅಭಿಯಾನದ ಮೂರನೇ ವರ್ಷವಾಗಿದೆ.

ಮಣಿಪಾಲದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ತನ್ನ ಸ್ವಾಗತ ಭಾಷಣದಲ್ಲಿ , "ಕ್ಯಾನ್ಸರ್ ಇರುವ ಯಾವುದೇ ಮಗು ಚಿಕಿತ್ಸೆ ಇಲ್ಲದೆ ಹೋಗಬಾರದು" ಈ ನಿಟ್ಟಿನಲ್ಲಿ ಕೆಎಂಸಿ, ಮಣಿಪಾಲವು ಶ್ರಮಿಸುತ್ತಿದೆ ಎಂದು ಹೇಳಿದರು. ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಹರೀಶ್ ವರ್ಮಾ ಟಿ ಅವರು ತಮ್ಮ ಅವಲೋಕನದಲ್ಲಿ, "ಕ್ಯಾನ್ಸರ್ ಹೊಂದಿರುವ ಮಕ್ಕಳಲ್ಲಿ ಸಮಗ್ರ ಚಿಕಿತ್ಸಾ ಆರೈಕೆ ವಿಧಾನದಲ್ಲಿ ಗರಿಷ್ಠ ಸಾಧನೆ ಸಾಧಿಸಲು ಬಹಳಷ್ಟು ಜನರು ಕೈಜೋಡಿಸುವ ಅವಶ್ಯಕತೆ ಇದೆ " ಎಂದು ಹೇಳಿದರು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿದ್ದ ಜೀತ್ ಅಸೋಸಿಯೇಷನ್ ಫಾರ್ ಸಪೋರ್ಟ್ ಆಫ್ ಕ್ಯಾನ್ಸರ್ ಪೇಶೆಂಟ್ (ಜಸ್ಕ್ಯಾಪ್ JASCAP) ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಕೆ.ವಿ.ಗಣಪತಿ ಅವರು, ಬಾಲ್ಯದ ರಕ್ತದ ಕ್ಯಾನ್ಸರ್‌ಗಳ ಕುರಿತಾದ ಮಾಹಿತಿ ಕಿರು ಪುಸ್ತಕವನ್ನು ಬಿಡುಗಡೆ ಮಾಡಿದರು ಮತ್ತು ಅವರು ಮಾತನಾಡುತ್ತಾ "ರೋಗದ ಕುರಿತು ವಿವರವಾದ ಮಾಹಿತಿಯನ್ನು ಆರೈಕೆ ಮಾಡುವವರಿಗೆ ಅವರಿಗೆ ಚೆನ್ನಾಗಿ ಅರ್ಥವಾಗುವ ಭಾಷೆಯಲ್ಲಿ ನೀಡಬೇಕು" ಎಂದು ಹೇಳಿದರು. ಮಾಹೆ ಮಣಿಪಾಲದ ಮಾಜಿ ಉಪಕುಲಪತಿ ಡಾ.ರಾಜ್ ವಾರಿಯರ್ ಕಾರ್ಯಕ್ರಮದ ಗೌರವ ಅತಿಥಿಯಾಗಿದ್ದರು. ಅವರು ಮಾತನಾಡುತ್ತಾ , "ಕಳೆದ ಕೆಲವು ದಶಕಗಳಲ್ಲಿ ಬಾಲ್ಯದ ಕ್ಯಾನ್ಸರ್‌ಗಳಿಗೆ ಸಕಾಲದಲ್ಲಿ ಚಿಕಿತ್ಸೆ ದೊರಯುತ್ತಿರುವುದರಿಂದ, ಕಾಯಿಲೆಯಿಂದ ಬದುಕುಳಿಯುವಲ್ಲಿ ಮಹತ್ತರವಾದ ಸುಧಾರಣೆ ಕಂಡುಬಂದಿದೆ ಮತ್ತು ಬೆಂಬಲದ ಆರೈಕೆಯು ಚಿಕಿತ್ಸೆಯ ಪ್ರಮುಖ ಅಂಶವಾಗಿದೆ" ಎಂದರು.

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ವಂದಿಸಿದರು. ಬೋಧನಾ ಆಸ್ಪತ್ರೆಗಳ ಕಾರ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಮತ್ತು ಕೆ ಎಂ ಸಿ ಮಣಿಪಾಲದ ಸಹ ಡೀನ್ ಡಾ ಕೃಷ್ಣಾನಂದ ಪ್ರಭು ಉಪಸ್ಥಿತರಿದ್ದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ನರ್ಸಿಂಗ್ ಸೇವೆಗಳ ಮುಖ್ಯಸ್ಥೆ ಡಾ.ಪಿ.ಸುಬಾ ಸೂರಿಯಾ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು. ಸಭಾ ಕಾರ್ಯಕ್ರಮದ ನಂತರ ಮಕ್ಕಳು ಮತ್ತು ಅವರ ಪಾಲಕರಿಗೆ ಮನರಂಜನಾ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಅರ್ಚನಾ ಎಂ.ವಿ ಮತ್ತು ವಿಭಾಗದ ಸಹ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ.ವಾಸುದೇವ ಭಟ್ ಮುಖ್ಯ ಅತಿಥಿಗಳನ್ನು ಪರಿಚಯಿಸಿದರು. ವಿಭಾಗದ ಸಾಮಾಜಿಕ ಸೇವಾ ಕಾರ್ಯಕರ್ತೆ ವಾಣಿಶ್ರೀ ಕಾರ್ಯಕ್ರಮವನ್ನು ನಿರೂಪಿಸಿದರು .

*ವೈದ್ಯಕೀಯ ಅಧೀಕ್ಷಕರು*

THE CANARA POST

# Manipal: Kasturba Medical College and Hospital observes International Childhood Cancer Day



**Udupi, Feb 17, 2023:** Kasturba Medical College and Hospital, Manipal observed International Childhood Cancer Day (ICCD) on February 15th. The event aims to raise awareness about childhood cancers and express support for children with cancer, their caregivers, and cancer survivors.

This is the third year of our three-year campaign for ICCD (2021-2023) under the theme of 'Better Survival' is achievable #throughyourhands.

Dr. Padmaraj Hegde, the Dean of KMC, welcomed attendees to the event, stating that KMC is committed to ensuring that no child with cancer goes untreated.

Dr. Harish Varma T, Assistant Professor in the Division of Pediatric Hematology and Oncology, stressed that a holistic approach involving multiple stakeholders is necessary to achieve maximal cure rates in children with cancer.

Dr. K V Ganapathy, CEO of Jeet Association for Support to Cancer Patients (JASCAP), who was the Chief Guest, released an information booklet on childhood blood cancers. He emphasized the importance of providing detailed information in a language understood by caregivers.

Dr. Raj Warrier, former Vice Chancellor of MAHE, who was the guest of honor highlighted the significant improvement in survival rates for childhood cancer in recent decades, attributing supportive care as a critical component of treatment.

Dr. Anand Venugopal, COO of Teaching Hospitals, MAHE Manipal, and Dr. Krishnananda Prabhu, Associate Dean of KMC were present.

Dr. Avinash Shetty, Medical Superintendent, delivered the vote of thanks, and Dr. P Suba Sooria, Head of Nursing Services at Kasturba Hospital, presented prizes to competition winners.

The formal function was followed by an entertainment program for children and their caregivers.

Dr. Archana M V, Assistant Professor, and Dr. Vasudeva Bhat, Incharge Head of Division of Pediatric Hematology and Oncology, introduced the Chief Guest and Guest of Honor, respectively.

Vanishree, MSW in Pediatric Hematology and Oncology, served as the master of ceremonies for the event.

ನಮ್ಮ UDUPI BULLETIN

# ಕೆ.ಎಂ.ಸಿ ಮಣಿಪಾಲ: ಅಂತಾರಾಷ್ಟ್ರೀಯ ಬಾಲ್ಯ ಕ್ಯಾನ್ಸರ್ ದಿನದ ಆಚರಣೆ



**ಮಣಿಪಾಲ, ಫೆ.17:** ಸರಿಯಾದ ತಂಡದಿಂದ ಸರಿಯಾದ ಚಿಕಿತ್ಸೆಯೊಂದಿಗೆ ಸರಿಯಾದ ಸಮಯದಲ್ಲಿ ಚಿಕಿತ್ಸೆ ನೀಡಿದರೆ ಬಾಲ್ಯದ ಹೆಚ್ಚಿನ ಕ್ಯಾನ್ಸರ್ ಗಳನ್ನು ಗುಣಪಡಿಸಬಹುದು. ಬಾಲ್ಯದ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಕ್ಯಾನ್ಸರ್ ಪೀಡಿತ ಮಕ್ಕಳು, ಅವರ ಆರೈಕೆ ಮಾಡುವವರು ಮತ್ತು ಕ್ಯಾನ್ಸರ್ ನಿಂದ ಬದುಕುಳಿದವರಿಗೆ ಬೆಂಬಲ ವ್ಯಕ್ತಪಡಿಸಲು ಜಾಗತಿಕವಾಗಿ ಪ್ರತಿ ವರ್ಷ ಫೆಬ್ರವರಿ 15 ರಂದು ಅಂತರರಾಷ್ಟ್ರೀಯ ಬಾಲ್ಯದ ಕ್ಯಾನ್ಸರ್ ದಿನವನ್ನು (ಐಸಿಸಿಡಿ) ಆಚರಿಸಲಾಗುತ್ತದೆ. `ಉತ್ತಮ ಬದುಕುಳಿಯುವಿಕೆ ನಿಮ್ಮ ಕೈಗಳ ಮೂಲಕ ಸಾಧಿಸಬಹುದಾಗಿದೆ' ಎಂಬುದು ಐಸಿಸಿ ಡಿ ಯ ಮೂರು ವರ್ಷಗಳ ಧ್ಯೇಯ (2021-2023) ವಾಕ್ಯವಾಗಿದ್ದು, ಇದು ಈ ಅಭಿಯಾನದ ಮೂರನೇ ವರ್ಷವಾಗಿದೆ.

ಮಣಿಪಾಲದ ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ತನ್ನ ಸ್ವಾಗತ ಭಾಷಣದಲ್ಲಿ, ಕ್ಯಾನ್ಸರ್ ಇರುವ ಯಾವುದೇ ಮಗು ಚಿಕಿತ್ಸೆ ಇಲ್ಲದೆ ಹೋಗಬಾರದು. ಈ ನಿಟ್ಟಿನಲ್ಲಿ ಕೆಎಂಸಿ, ಮಣಿಪಾಲವು ಶ್ರಮಿಸುತ್ತಿದೆ ಎಂದು ಹೇಳಿದರು. ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಹರೀಶ್ ವರ್ಮಾ ಟಿ ಅವರು ತಮ್ಮ ಅವಲೋಕನದಲ್ಲಿ, ಕ್ಯಾನ್ಸರ್ ಹೊಂದಿರುವ ಮಕ್ಕಳಲ್ಲಿ ಸಮಗ್ರ ಚಿಕಿತ್ಸಾ ಆರೈಕೆ ವಿಧಾನದಲ್ಲಿ ಗರಿಷ್ಠ ಸಾಧನೆ ಸಾಧಿಸಲು ಬಹಳಷ್ಟು ಜನರು ಕೈಜೋಡಿಸುವ ಅವಶ್ಯಕತೆ ಇದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿದ್ದ ಜೀತ್ ಅಸೋಸಿಯೇಷನ್ ಫಾರ್ ಸಪೋರ್ಟ್ ಆಫ್ ಕ್ಯಾನ್ಸರ್ ಪೇಶೆಂಟ್ (ಜಸ್ಕ್ಯಾಪ್) ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ಕೆ.ವಿ.ಗಣಪತಿ ಅವರು, ಬಾಲ್ಯದ ರಕ್ತದ ಕ್ಯಾನ್ಸರ್‌ಗಳ ಕುರಿತಾದ ಮಾಹಿತಿ ಕಿರು ಪುಸ್ತಕವನ್ನು ಬಿಡುಗಡೆ ಮಾಡಿದರು ಮತ್ತು ಅವರು ಮಾತನಾಡುತ್ತಾ, ರೋಗದ ಕುರಿತು ವಿವರವಾದ ಮಾಹಿತಿಯನ್ನು ಆರೈಕೆ ಮಾಡುವವರಿಗೆ ಅವರಿಗೆ ಚೆನ್ನಾಗಿ ಅರ್ಥವಾಗುವ ಭಾಷೆಯಲ್ಲಿ ನೀಡಬೇಕು ಎಂದು ಹೇಳಿದರು.

ಮಾಹೆ ಮಣಿಪಾಲದ ಮಾಜಿ ಉಪಕುಲಪತಿ ಡಾ.ರಾಜ್ ವಾರಿಯರ್ ಕಾರ್ಯಕ್ರಮದ ಗೌರವ ಅತಿಥಿಯಾಗಿದ್ದರು. ಅವರು ಮಾತನಾಡುತ್ತಾ, ಕಳೆದ ಕೆಲವು ದಶಕಗಳಲ್ಲಿ ಬಾಲ್ಯದ ಕ್ಯಾನ್ಸರ್‌ಗಳಿಗೆ ಸಕಾಲದಲ್ಲಿ ಚಿಕಿತ್ಸೆ ದೊರಯುತ್ತಿರುವುದರಿಂದ, ಕಾಯಿಲೆಯಿಂದ ಬದುಕುಳಿಯುವಲ್ಲಿ ಮಹತ್ತರವಾದ ಸುಧಾರಣೆ ಕಂಡುಬಂದಿದೆ ಮತ್ತು ಬೆಂಬಲದ ಆರೈಕೆಯು ಚಿಕಿತ್ಸೆಯ ಪ್ರಮುಖ ಅಂಶವಾಗಿದೆ ಎಂದರು.

ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ವಂದಿಸಿದರು. ಬೋಧನಾ ಆಸ್ಪತ್ರೆಗಳ ಕಾರ್ಯನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಮತ್ತು ಕೆಎಂಸಿ ಮಣಿಪಾಲದ ಸಹ ಡೀನ್ ಡಾ. ಕೃಷ್ಣಾನಂದ ಪ್ರಭು ಉಪಸ್ಥಿತರಿದ್ದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ನರ್ಸಿಂಗ್ ಸೇವೆಗಳ ಮುಖ್ಯಸ್ಥೆ ಡಾ. ಪಿ.ಸುಬಾ ಸೂರಿಯಾ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು.

ಸಭಾ ಕಾರ್ಯಕ್ರಮದ ನಂತರ ಮಕ್ಕಳು ಮತ್ತು ಅವರ ಪಾಲಕರಿಗೆ ಮನರಂಜನಾ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಅರ್ಚನಾ ಎಂ.ವಿ ಮತ್ತು ವಿಭಾಗದ ಸಹ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ. ವಾಸುದೇವ ಭಟ್ ಮುಖ್ಯ ಅತಿಥಿಗಳನ್ನು ಪರಿಚಯಿಸಿದರು. ವಿಭಾಗದ ಸಾಮಾಜಿಕ ಸೇವಾ ಕಾರ್ಯಕರ್ತೆ ವಾಣಿಶ್ರೀ ಕಾರ್ಯಕ್ರಮ ನಿರೂಪಿಸಿದರು.

## Other Links:

Public Next - https://publicnext.com/article/nid/Udupi/Health-and-Fitness/?lang=kn&node=782429